# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈವಿ:2024-25: 2431

ದಿನಾಂಕ:16.10.2024

-ಅತಿ ಜರೂರು-

ಗೆ

ಪ್ರಾಂಶುಪಾಲರು

ಸರ್ಕಾರಿ ಪ್ರಥಮ ದರ್ಜೆ ಕಾಲೇಜು

ಕುಣಿಗಲ್.

ವಿಷಯ:- ನಾಲ್ಕನೇ ವರ್ಷದ ಸ್ನಾತಕ ಹಾನರ್ಸ್ ಪದವಿಯ ಅಧ್ಯಯನಕ್ಕೆ ಇಚ್ಚಿಸಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಸಲ್ಲಿಸುವ ಕುರಿತು.

ಉಲ್ಲೇಖ:- 1. ವಿವಿ ಸುತ್ತೋಲೆ ಪತ್ರದ ಸಂಖ್ಯೆ:ತುವಿ:ಶೈವಿ:2024-25/1157 ದಿ:14.06.2024.

2. ತಮ್ಮ ಕಾಲೇಜಿನ ಬಿ.ಕಾಂ ಅಂತಿಮ ವರ್ಷದ ವಿದ್ಯಾರ್ಥಿಗಳ ಮನವಿ ಪತ್ರ ದಿ:10.10.2024.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಾಲ್ಕನೇ ವರ್ಷದ ಸ್ನಾತಕ ಹಾನರ್ಸ್ ಪದವಿಯ ಅಧ್ಯಯನಕ್ಕೆ ಇಚ್ಚಿಸಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಉಲ್ಲೇಖ (01)ರ ಪತ್ರದಲ್ಲಿ ವಿಶ್ವವಿದ್ಯಾನಿಲಯದಿಂದ ಸುತ್ತೋಲೆಯನ್ನು ಹೊರಡಿಸಲಾಗಿತ್ತು. ಆದರೆ ಇದುವರೆಗೂ ತಮ್ಮ ಕಾಲೇಜಿನಿಂದ ಯಾವುದೇ ಪ್ರತ್ಯುತ್ತರ ಬಂದಿರುವುದಿಲ್ಲ. ಉಲ್ಲೇಖ (02)ರ ಪತ್ರವನ್ನು ಓದಲಾಗಿ ಪ್ರಸ್ತುತ ತಮ್ಮ ಕಾಲೇಜಿನಲ್ಲಿ ನಾಲ್ಕನೇ ವರ್ಷದ ಸ್ನಾತಕ ಹಾನರ್ಸ್ ಪದವಿಯ ಪ್ರವೇಶಾತಿಗೆ ಇಚ್ಚಿಸಿರುವ ವಿದ್ಯಾರ್ಥಿಗಳು ಮೂರು ವರ್ಷಗಳ ಎಲ್ಲಾ ಪರೀಕ್ಷೆಯಲ್ಲಿ ಉತ್ತೀರ್ಣಗೊಂಡಿರುವ ಮತ್ತು ಸಿಜಿಪಿಎ 7.5 ಹೊಂದಿರುವ ಬಗ್ಗೆ Result Sheet ನೊಂದಿಗೆ ಮಾಹಿತಿಯನ್ನು ಸಲ್ಲಿಸುವುದು.

ನಾಲ್ಕನೇ ವರ್ಷದ ಹಾನರ್ಸ್ ಪದವಿಯ ಅಧ್ಯಯನಕ್ಕೆ ಕಾಲೇಜಿನಲ್ಲಿ ಲಭ್ಯವಿರುವ ಮೂಲಭೂತ ಸೌಕರ್ಯಗಳು ಹಾಗೂ ಬೋಧಕ ಸಿಬ್ಬಂದಿಗಳ ಮಾಹಿತಿಯನ್ನು ವಿಶ್ವವಿದ್ಯಾನಿಲಯಕ್ಕೆ ಅತೀ ಜರೂರಾಗಿ ಈ ಪತ್ರ ತಲುಪಿದ ಮೂರು ದಿನಗಳೊಳಗಾಗಿ ಸಲ್ಲಿಸಿದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ,

D-Suresh 16/10/2024.

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸ್ಟ್ , ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಸದರಿ ಪತ್ರದ ಮಾಹಿತಿಯನ್ನು ಈ ಮೇಲ್ ಮೂಲಕ ಕಾಲೇಜಿಗೆ ಕೂಡಲೇ ಕಳುಹಿಸತಕ್ಕದ್ದು.
4. ಕಛೇರಿ ಪ್ರತಿ.